# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷಿ ಇಲಾಖೆಯ 2013-14ನೇ ಸಾಲಿನಲ್ಲಿ ಚಾಲ್ತಿಯೋಜನೆಗಳಡಿ ಮೊದಲನೇ ತ್ರೈಮಾಸಿಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

3

**ಸರ್ಕಾರದ ಆದೇಶ ಸಂಖ್ಯೆ: ಕೃಇ/30/ಕೃಯೋಕಾ/2013,**
**ಬೆಂಗಳೂರು, ದಿನಾಂಕ:17.05.2013.**

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಕೃಇ/27/ಕೃಯೋಕಾ/2013, ದಿನಾಂಕ:05-04-2013.
2. ಸರ್ಕಾರದ ಆದೇಶ ಸಂಖ್ಯೆ:FD/01/TFP/2013, ದಿನಾಂಕ:10-05-2013.
3. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಪಿಎಲ್ಎನ್3/ತಾಂ-1/ಅನುದಾನ ಬಿಡುಗಡೆ/2013-14, ದಿ:12-03-2013.

**ಪ್ರಸ್ತಾವನೆ:**

ಮೇಲೆ ಓದಲಾದ ಉಲ್ಲೇಖ(1)ರಲ್ಲಿ 2012-13ನೇ ಸಾಲಿನಲ್ಲಿ ಕೃಷಿ ಇಲಾಖೆಯ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2013-14ನೇ ಸಾಲಿನಲ್ಲಿ ಮುಂದುವರೆಸಲು ಅನುಮತಿಸಿದೆ.

ಮೇಲೆ ಓದಲಾದ ಉಲ್ಲೇಖ(2)ರ ಆದೇಶದನ್ವಯ ರೂ.5.00 ಕೋಟಿಗಳಿಗಿಂತ ಕಡಿಮೆ ಆಯವ್ಯಯದಲ್ಲಿ ಅವಕಾಶವಿರುವ ರಾಜ್ಯ ಯೋಜನೆಗಳಿಗೆ ಆಡಳಿತ ಇಲಾಖೆಯು ಅನುದಾನ ಅನುದಾನ ಬಿಡುಗಡೆಗೊಳಿಸಲು ಹಾಗೂ ಮೊದಲನೇ ಕಂತನ್ನು ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಶೇ.50 ರಷ್ಟನ್ನು ಆಡಳಿತ ಇಲಾಖೆಗಳು ಬಿಡುಗಡೆ ಮಾಡಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಮೇಲೆ ಓದಲಾದ ಉಲ್ಲೇಖ(3)ರ ಪತ್ರದಲ್ಲಿ 2013-14ನೇ ಸಾಲಿನಲ್ಲಿ ಚಾಲ್ತಿ ಯೋಜನೆಗಳಡಿ ಮುಂದುವರೆಸಲಾಗಿರುವ 17 ಯೋಜನಾ ಕಾರ್ಯಕ್ರಮಗಳಿಗೆ ಮೊದಲನೇ ತ್ರೈಮಾಸಿಕ ಅನುದಾನ ರೂ. 14,962.50 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೃಷಿ ಆಯುಕ್ತರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಕೃಷಿ ಆಯುಕ್ತರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, 2013-14ನೇ ಸಾಲಿನಲ್ಲಿ ಮುಂದುವರೆಸಲಾದ ಚಾಲ್ತಿಯೋಜನೆಗಳ ರಾಜ್ಯವಲಯ ಯೋಜನೆಗಳಿಗೆ **ರೂ. 14,695.82 ಲಕ್ಷಗಳನ್ನು (ಹದಿನಾಲ್ಕು ಸಾವಿರದ ಆರುನೂರಾ ತೊಂಭತ್ತೈದು ಲಕ್ಷದ ಎಂಬತ್ತೆರಡು ಸಾವಿರ ರೂಪಾಯಿಗಳು ಮಾತ್ರ)** ಮೊದಲನೇ ತ್ರೈಮಾಸಿಕಕ್ಕೆ ಬಿಡುಗಡೆ ಮಾಡಲು ಮಂಜೂರಾತಿಯನ್ನು ನೀಡಲಾಗಿದೆ. 2013-14ನೇ ಸಾಲಿನ ಮೊದಲನೇ ತ್ರೈಮಾಸಿಕದಲ್ಲಿ ಮುಂದುವರೆಸಲಾದ ಚಾಲ್ತಿಯೋಜನೆಗಳ ರಾಜ್ಯವಲಯ ಯೋಜನೆಗಳಡಿ ಬಿಡುಗಡೆ ಮಾಡಿರುವ ಅನುದಾನದ ವಿವರ ಈ ಕೆಳಕಂಡಂತಿದೆ.

..2..

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ಯೋಜನೆಯ ಹೆಸರು | ಲೆಕ್ಕ ಶೀರ್ಷಿಕೆ | 2013-14ರಲ್ಲಿ ಒದಗಿಸಿರುವ ಅನುದಾನ | ಮೊದಲನೇ ತ್ರೈಮಾಸಿಕಕ್ಕೆ ಬಿಡುಗಡೆ ಮಾಡಿರುವ ಅನುದಾನ |
|---|---|---|---|---|
| 1 | ಕೃಷಿ ನಿರ್ದೇಶನಾಲಯ | 2401-00-001-1-01 | 3000.00 | **750.00** |
| 2 | ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ | 2401-00-103-0-15 | 10000.00 | **2500.00** |
| 3 | ಬೀಜ ಹಾನಿ ಸಂಭವ ನಿಧಿ | 2401-00-103-0-19 | 500.00 | **125.00** |
| 4 | ರಾಸಾಯನಿಕ ಗೊಬ್ಬರದ ಮೇಲಿನ ಬಡ್ಡಿ ಸಹಾಯಧನ | 2401-00-105-0-27 | 8000.00 | **2000.00** |
| 5 | ಕೀಟನಾಶಕ ನಿಯಂತ್ರಣ ಪ್ರಯೋಗಶಾಲೆ | 2401-00-107-0-03 | 650.00 | **162.50** |
| 6 | ಮಣ್ಣಿನ ಸತ್ವ ಹೆಚ್ಚಿಸುವಿಕೆ | 2401-00-107-0-23 | 7500.00 | **1875.00** |
| 7 | ವಿಸ್ತೃತ ನೀರಾವರಿ ಯೋಜನೆ | 2401-00-108-1-15 | 10000.00 | **2500.00** |
| 8 | ಸಮಗ್ರ ಕೃಷಿ ವಿಸ್ತರಣಾ ಪದ್ದತಿ | 2401-00-109-0-27 | 6000.00 | **1500.00** |
| 9 | ಜಿಲ್ಲಾ ಕೃಷಿ ತರಬೇತಿ ಕೇಂದ್ರಗಳ ಉನ್ನತೀಕರಣ | 2401-00-109-0-30 | 500.00 | **125.00** |
| 10 | ನೂತನ ಕೃಷಿ ಉತ್ತೇಜನ ಯೋಜನೆ | 2401-00-111-0-02 | 10000.00 | **2500.00** |
| 11 | ಹಾವು ಕಡಿತಕ್ಕೆ ಪರಿಹಾರ | 2401-00-800-1-63 | 500.00 | **125.00** |
| 12 | ಮಣ್ಣು ಆರೋಗ್ಯ ಕೇಂದ್ರಗಳು | 2401-00-105-0-01 | 300.00 | **100.00** |
| 13 | ಬೇಸಾಯ ಸಂಬಂಧಿತ ಚಟುವಟಿಕೆಗಳು | 2401-00-109-0-21 | 300.00 | **100.00** |
| 14 | ಕೃಷಿ ಮೇಳ | 2401-00-109-0-31 | 400.00 | **133.33** |
| 15 | ಇತರೆ ಕೃಷಿ ಯೋಜನೆಗಳು | 2401-00-800-1-40 | 200.00 | **66.66** |
| 16 | ರೈತರ ಅಧ್ಯಯನ ಪ್ರವಾಸ | 2401-00-800-3-07 | 300.00 | **100.00** |
| 17 | ಕರ್ನಾಟಕ ಕೃಷಿ ಅಭಿಯಾನ | 2401-00-800-3-08 | 100.00 | **33.33** |
| | **ಒಟ್ಟು** | | **58250.00** | **14,695.82** |

ರಾಜ್ಯವಲಯ ಯೋಜನೆಗಳಡಿ ಆಗಿಂದ್ದಾಗೆ ಹೊರಡಿಸಲಾಗುವ ಮಾರ್ಗ ಸೂಚಿಗಳನ್ನು ಅನುಸರಿಸಿ ಕೃಷಿ ಆಯುಕ್ತರು ಯೋಜನೆಗಳನ್ನು ಅನುಷ್ಠಾನಗೊಳಿಸುವುದು. ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ/01/ಟಿಎಫ್‌ಪಿ/2013, ದಿನಾಂಕ:10-05-2013ರ ಆದೇಶದಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಟಿಪ್ಪಣಿ ಸಂ:ಕೃಇ/83/ಆಂಆಸ/2013, ದಿನಾಂಕ:14-05-2013 ರಲ್ಲಿ ಆಂತರಿಕ ಆರ್ಥಿಕ ಸಲಹೆಗಾರರು ನೀಡಿರುವ ಸಹಮತಿಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜೆ.ಆರ್. ವಿಶ್ವನಾಥಾಚಾರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

ಪ್ರತಿಯನ್ನು:-

1) ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
2) ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ವಿಭಾಗ, ಬೆಂಗಳೂರು
4) ಸರ್ಕಾರದ ಉಪ ಕಾರ್ಯದರ್ಶಿ -1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
5) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
6) ಸರ್ಕಾರಧ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ, ಬೆಂಗಳೂರು
7) ಸರ್ಕಾರದ ಅಧೀನ ಕಾರ್ಯದರ್ಶಿ, ಕೃಷಿ ಇಲಾಖೆ (ಕೃಷಿ ಸೇವೆ).
8) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
9) ಸರ್ಕಾರದ ಕಾರ್ಯದರ್ಶಿ (ಆಹಾರ ಸಂಸ್ಕರಣೆ ಹಾಗೂ ಕಟಾವು ತಂತ್ರಜ್ಞಾನ), ಕೃಷಿ ಇಲಾಖೆ, ಇವರ ಆಪ್ತ ಶಾಖೆ.
10) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಶಾಖೆ.
11) ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
12) ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
13) ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು ರವರಿಗೆ ಮಾಹಿತಿಗಾಗಿ ನೀಡಲಾಗಿದೆ.(ಕೃಷಿ ಆಯುಕ್ತರ ಮುಖಾಂತರ).
14) ಶಾಖಾಧಿಕಾರಿ, ಕೃಷಿ ಯೋಜನಾ ಘಟಕ, ಎ ಮತ್ತು ಬಿ, ಕೃಷಿ ಇಲಾಖೆ.
15) ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.

ಸಂ: ಪಿಎಲ್‌ಎನ್3/ಲೆಂ-1/ಅನುದಾನ ಬಿಡುಗಡೆ/2013-14 ದಿನಾಂಕ: 18/05/2013.

2013-14 ನೇ ಸಾಲಿನ ಚಾಲ್ತಿ ಯೋಜನೆಗಳಿಗೆ ಮೊದಲನೇ ಕಂತಿನ ಅನುದಾನ ಬಿಡುಗಡೆ ಆದೇಶವನ್ನು ಈ ಕೆಳಕಂಡವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

[signature]
ಉಪ ಕೃಷಿ ನಿರ್ದೇಶಕರು
(ಯೋಜನೆ)

ಇವರಿಗೆ,

ಅಕೃನಿ (ಜಲಾನಯನ) (ಮಾನಿಟರಿಂಗ್) (ವಾ.ಕೃ.) ಅನಿ (ಪ್ರಕಟಣೆ)
ಜಕೃನಿ (ಅಭಿವೃದ್ಧಿ) (ತರಬೇತಿ) (ಪಿಎಂಕೆಎಸ್)
ಉಕೃನಿ (ಕೃ ಸಂಶೋ) (ಗಣಕಕೇಂದ್ರ) (ಬೀಜಾಭಿವೃದ್ಧಿ)
(ಗೊಬ್ಬರ) (ಕೀ.ನಿ.ಪ್ರ) (ಕ್ಷೇತ್ರ ಪ್ರಯೋಗ)
(ಆಹಾರ ಬೆಳೆಗಳು) (ತರಬೇತಿ) (ಕೃಷಿ ನಿರ್ವಹಣೆ)
(ಮಣ್ಣು ಆರೋಗ್ಯ) (ಕೃಷಿ ವಾರ್ತೆ) (ಸಸ್ಯ ರೋಗಶಾಸ್ತ್ರ)
(ರಾಜ್ಯ ಕ್ಷೇತ್ರಗಳು)
ಮುಖ್ಯ ಲೆಕ್ಕಾಧಿಕಾರಿಗಳು.
ಆಯುಕ್ತಾಲಯ ಅಭಿಯಂತರರು.
ವಿಕೃನಿ (ಸಂಶೋಧನೆ)
ಕೃಷಿ ಆಯುಕ್ತರ ಆಪ್ತ ಶಾಖೆ.
ಕೃಷಿ ನಿರ್ದೇಶಕರ ಆಪ್ತ ಶಾಖೆ.

18/5